“ತೀವ್ರವಾದಿಗಳು ನಾಶವಾದರು

ಅಬ್ದುಲ್ಲಾ ಬಿನ್ ಮಸ್ಊದ್ (ಅಲ್ಲಾಹು ಅವರ ಬಗ್ಗೆ ಸಂಪ್ರೀತನಾಗಲಿ) ರಿಂದ ವರದಿ. ಅವರು
ಹೇಳಿದರು: ಅಲ್ಲಾಹನ ಸಂದೇಶವಾಹಕರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ)
ಹೇಳಿದರು: “ತೀವ್ರವಾದಿಗಳು ನಾಶವಾದರು.” ಅವರು ಇದನ್ನು ಮೂರು ಸಲ ಹೇಳಿದರು.
[صحيح] [رواه مسلم]

ಧಾರ್ಮಿಕ ಮತ್ತು ಲೌಕಿಕ ವಿಷಯಗಳಲ್ಲಿ ಹಾಗೂ ಮಾತು ಮತ್ತು ಕೆಲಸಗಳಲ್ಲಿ, ಯಾವುದೇ ಮಾರ್ಗದರ್ಶನ ಅಥವಾ ಜ್ಞಾನವಿಲ್ಲದೆ ಅತಿರೇಕಕ್ಕೆ ಹೋಗುವವರು ಮತ್ತು ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿ ಇರಲಿ) ಕಲಿಸಿದ ಧಾರ್ಮಿಕ ಎಲ್ಲೆಯನ್ನು ಮೀರುವವರಿಗೆ ಉಂಟಾಗುವ ನಾಶ-ನಷ್ಟಗಳ ಬಗ್ಗೆ ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿ ಇರಲಿ) ರವರು ತಿಳಿಸುತ್ತಿದ್ದಾರೆ

http://www.sunnah.global/hadeeth/kn/show/3420